# ಕಳೆದ ನಾಲ್ಕೂವರೆ ವರ್ಷಗಳ ಅವಧಿಯಲ್ಲಿ ನೀರಾವರಿ ಯೋಜನೆಗಳಿಗೆ 45 ಸಾವಿರ ಕೋಟಿ ರೂ. ವೆಚ್ಚ

## -ಮುಖ್ಯಮಂತ್ರಿ ಸಿದ್ಧರಾಮಯ್ಯ



**ವಿಜಯಪುರ: ಡಿ,20 –** ನೀರಾವರಿ ಯೋಜನೆಗಳಿಗಾಗಿ ಪ್ರತಿವರ್ಷ ಹತ್ತು ಸಾವಿರ ಕೋಟಿ ರೂ.ಗಳನ್ನು ಒದಗಿಸುವುದಾಗಿ ಭರವಸೆ ನೀಡಿದ್ದ ರಾಜ್ಯ ಸರ್ಕಾರ ಕಳೆದ ನಾಲ್ಕೂವರೆ ವರ್ಷಗಳಲ್ಲಿ 45 ಸಾವಿರ ಕೋಟಿ ರೂ.ಗಳನ್ನು ಖರ್ಚು ಮಾಡುವ ಮೂಲಕ ನೀರಾವರಿ ಕ್ಷೇತ್ರದಲ್ಲಿ ಗಣನೀಯ ಪ್ರಮಾಣದ ಅಭಿವೃದ್ಧಿ ಸಾಧಿಸಿದೆ ಎಂದು ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಹೇಳಿದರು.

ಮುದ್ದೇಬಿಹಾಳದಲ್ಲಿಂದು ಮುದ್ದೇಭಿಹಾಳ ವಿಧಾನಸಭಾ ಮತಕ್ಷೇತ್ರದ ನಾಗರಬೆಟ್ಟ ಏತ ನೀರಾವರಿ, ಆಲಮಟ್ಟಿ ಎಡದಂಡೆ ಕಾಲುವೆ ನವೀಕರಣ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ-ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ರಾಜ್ಯದ ಜನತೆಗೆ ನೀಡಿದ ಭರವಸೆಯಂತೆ 165 ಭರವಸೆಗಳ ಪೈಕಿ 155ಕ್ಕೂ ಹೆಚ್ಚು ಭರವಸೆಗಳನ್ನು ಈಡೇರಿಸಲಾಗಿದೆ. ರಾಜ್ಯ ಸರ್ಕಾರದ 5 ವರ್ಷದ ಅವಧಿಯಲ್ಲಿ

50 ಸಾವಿರ ಕೋಟಿ ರೂ.ಗಳನ್ನು ನೀರಾವರಿ ಯೋಜನೆಗಳಿಗೆ ವೆಚ್ಚ ಮಾಡಲು ಭರವಸೆ ನೀಡಲಾಗಿ, ಈವರೆಗೆ 45 ಸಾವಿರ ಕೋಟಿ ರೂ.ಗಳನ್ನು ಖರ್ಚು ಮಾಡಿದ್ದು, ಬರುವ ಮಾರ್ಚ್‌ವರೆಗೆ 50 ಸಾವಿರ ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗುವುದೆಂದು ಹೇಳಿದರು.

ರಾಜ್ಯದ ಜನತೆಯ ಮೇಲೆ ಅಪಾರ ನಂಬಿಕೆಯನ್ನು ಇಟ್ಟುಕೊಂಡಿದ್ದೇವೆ. ಜನರ ಅನುಕೂಲಕ್ಕಾಗಿ ಈಗಾಗಲೇ 50 ಸಾವಿರ ರೂ.ಗಳಂತೆ ಒಟ್ಟು 8165 ಕೋಟಿ ರೂ.ಗಳ ಸಾಲವನ್ನು ಮನ್ನಾ ಮಾಡುವ ಮೂಲಕ ರೈತಪರ ಸರ್ಕಾರ ಎಂಬುವುದನ್ನು ಸಾಬೀತುಪಡಿಸಿದೆ. ವಿಜಯಪುರ ಜಿಲ್ಲೆಯ 1.80 ಲಕ್ಷ ಜನರ 700 ಕೋಟಿ ರೂ. ಸಾಲ ಮನ್ನಾ ಸಹ ಮಾಡಲಾಗಿದೆ. ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿಯೇ 1500 ಕೋಟಿ ರೂ. ಸಾಲ ಮನ್ನಾ ಮಾಡಲಾಗಿದೆ. ಅದರಂತೆ 3 ಲಕ್ಷ ರೂ.ಗಳವರೆಗೆ ಬಡ್ಡಿ ರಹಿತ ಸಾಲದ ನೀಡುವ ಯೋಜನೆ, ರೈತರಿಗೆ ಕೃಷಿ ಭಾಗ್ಯ ಯೋಜನೆಯಡಿ 1.85 ಲಕ್ಷ ಕೃಷಿ ಹೊಂಡಗಳ ನಿರ್ಮಾಣ, ಆತ್ಮಹತ್ಯೆ ಮಾಡಿಕೊಂಡ ಪ್ರತಿ ಕುಟುಂಬಗಳಿಗೆ 5 ಲಕ್ಷ ರೂ.ಗಳ ಪರಿಹಾರ, 2 ಸಾವಿರ ರೂ.ಗಳ ಮಾಶಾಸನ, ರೈತರ ಮಕ್ಕಳಿಗೆ ಶಿಕ್ಷಣ, ಆರೋಗ್ಯಕ್ಕೆ ವಿಶೇಷ ಸೌಲಭ್ಯ ಕಲ್ಪಿಸುವ ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ಹೇಳಿದರು.

ಅದರಂತೆ 10 ಎಚ್.ಪಿ.ವರೆಗಿನ ನೀರಾವರಿ ಪಂಪಸೆಟ್‌ಗಳಿಗೆ 9 ಸಾವಿರ ಕೋಟಿ ರೂ. ಸಬ್ಸಿಡಿ ಒದಗಿಸಲಾಗಿದೆ. ಅನ್ನಭಾಗ್ಯ, ಕೃಷಿಭಾಗ್ಯ, ಕ್ಷೀರಭಾಗ್ಯ, ಕ್ಷೀರಧಾರೆ, ಬಿದಾಯಿ, ಶೂಭಾಗ್ಯ, ಪಶುಭಾಗ್ಯ, ಮೈತ್ರಿ, ಮನಸ್ವಿನಿ, ಇಂದಿರಾ ಕ್ಯಾಂಟೀನ್, ಸಾಲ ಮನ್ನಾ, ಅಂಬೇಡ್ಕರ್ ಅಭಿವೃದ್ಧಿ ನಿಗಮ, ದೇವರಾಜ್ ಅರಸು ಅಭಿವೃದ್ಧಿ ನಿಗಮ, ವಾಲ್ಮೀಕಿ ಅಭಿವೃದ್ಧಿ ನಿಗಮ, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವ್ಯಾಪ್ತಿ ಬರುವ ಸಾಲಗಾರರ ಅಸಲು ಹಾಗೂ ಬಡ್ಡಿಯನ್ನು ಮನ್ನಾ ಮಾಡುವ ಮೂಲಕ

ಅವರನ್ನು ಋಣಮುಕ್ತರನ್ನಾಗಿ ಮಾಡಿರುವ ಹೆಮ್ಮೆಯ ಸರ್ಕಾರ ನಮ್ಮದಾಗಿದೆ ಎಂದು ಹೇಳಿದರು.

ನವಕರ್ನಾಟಕ ನಿರ್ಮಾಣದ ಸಂಕಲ್ಪವನ್ನು ನಾವು ಹೊಂದಿದ್ದೇವೆ. ವಿಶೇಷ ಘಟಕ ಯೋಜನೆ, ಗಿರಿಜನ ಉಪಯೋಜನೆಯಡಿ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಮೀಸಲಿಡುವ ಅನುದಾವನ್ನು 24% ಹೆಚ್ಚಿಸಲಾಗಿದೆ. ಇದಕ್ಕಾಗಿ ಕಾನೂನು ರೂಪಿಸುವ ಮೂಲಕ ಅನುದಾನ ಲ್ಯಾಪ್ಸ್ ಆಗದಂತೆ ಕ್ರಮ ಕೈಗೊಳ್ಳಲಾಗಿದೆ. ಕಳೆದ ಐದು ವರ್ಷಗಳ ಅವಧಿಯಲ್ಲಿ ಈ ಕಾನೂನು ಜಾರಿಯಾದ ನಂತರ 86 ಸಾವಿರ ಕೋಟಿ ರೂ. ಖರ್ಚು ಮಾಡಲಾಗಿದೆ. ಈ ಹಿಂದೆ ಮಾನ್ಯ ದೇವರಾಜ್ ಅರಸು ಅವರು ಜಾರಿಗೊಳಿಸಿದ ಉಳುವವನೆ ಭೂಒಡೆಯ ಮಾದರಿಯಲ್ಲಿಯೇ ಹೊಸ ಐತಿಹಾಸಿಕ, ಕ್ರಾಂತಿಕಾರಿ ನಿರ್ಣಯವನ್ನು ನಮ್ಮ ರಾಜ್ಯ ಸರ್ಕಾರ ಕೈಗೊಂಡಿದ್ದು, ವಾಸಿಸುವವನೇ ಮನೆಯ ಒಡೆಯ ಎಂಬ ಕಾನೂನನ್ನು ಜಾರಿಗೊಳಿಸಿದ್ದೇವೆ ಎಂದು ಹೇಳಿದರು.

ರಾಜ್ಯದ ಜನರು ಈ ಎಲ್ಲ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಸೂಕ್ಷ್ಮವಾಗಿ ಗಮನಿಸಬೇಕು. ಯಾವುದೇ ಊಹಾಪೋಹಗಳಿಗೆ ಕಿವಿಗೊಡದೆ ರಾಜ್ಯದ ಸರ್ಕಾರದ ಅಭಿವೃದ್ಧಿಗೆ ತಕ್ಕಂತೆ ಮುಂದಿನ ದಿನಗಳಲ್ಲಿ ಆಶೀರ್ವದಿಸುವಂತೆ ಮನವಿ ಮಾಡಿದ ಅವರು, ಸಹಬಾಳ್ವೆಯಿಂದ ಇರಬೇಕು. ಬೇರೆ ಧರ್ಮದ ಬಗ್ಗೆ ಧರ್ಮ ಸಹಿಷ್ಣುತಾ ಭಾವನೆ ಇರಲಿ ಎಂದ ಅವರು, ಭಾರತೀಯರಾದ ನಾವೆಲ್ಲರೂ ಜಾತಿ, ಮತ, ಪಂಥ, ಬೇಧಭಾವ ಮಾಡದೇ ದ್ವೇಷಗಳ ಬಗ್ಗೆ ಎಚ್ಚರಿಕೆ ವಹಿಸುವಂತೆ ಹೇಳಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ, ಜಲಸಂಪನ್ಮೂಲ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಂ.ಬಿ.ಪಾಟೀಲ ಅವರು, ಜಿಜಿಲ್ಲೆಯ ಅನುಮೋದಿತ ನೀರಾವರಿ ಯೋಜನೆಗಳಿಗಾಗಿ ಒಟ್ಟು 13,769.70 ಕೋಟಿ ರೂ.

ನಿಗದಿಪಡಿಸಲಾಗಿದ್ದು, 6971.86 ಕೋಟಿ ರೂ. ಗಳ ವೆಚ್ಚದ ಕಾಮಗಾರಗಳು ಅನುಷ್ಠಾನಗೊಳ್ಳುತ್ತಿವೆ. ಈವರೆಗೆ ಒಟ್ಟು 5,110.80 ಕೋಟ ರೂ.ಗಳ ಮೊತ್ತವನ್ನು ನೀರಾವರಿ ಯೋಜನೆಗಳಿಗಾಗಿ ಖರ್ಚು ಮಾಡಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ನವದೆಹಲಿ ವಿಶೇಷ ಪ್ರತಿನಿಧಿಗಳಾದ ಮುದ್ದೇಬಿಹಾಳ ಕ್ಷೇತ್ರದ ಶಾಸಕ ಸಿ.ಎಸ್.ನಾಡಗೌಡ ಅವರು, ಹಸಿವಿನಿಂದ ಬಳಲುತ್ತಿದ್ದ ರಾಜ್ಯದ ಬಡ ಜನರ ಹಸಿದ ಹೊಟ್ಟೆಗೆ ಅನ್ನ ನೀಡಲು ಅನ್ನಭಾಗ್ಯದಂತಹ ಯೋಜನೆ, ಜನರಿಗೆ ನೇರವಾಗಿ ಸಿಗುವಂತಹ ಸೌಲಭ್ಯಗಳನ್ನು ದೊರಕಿಸಿಕೊಡಲು ಹಲವಾರು ಯೋಜನೆಗಳನ್ನು ಮಾನ್ಯ ಮುಖ್ಯಮಂತ್ರಿಗಳ ಕಾಳಜಿಯಿಂದಾಗಿ ಜಾರಿಗೊಂಡಿವೆ. ರಾಜ್ಯದ ಎಲ್ಲ ಕ್ಷೇತ್ರಗಳಿಗೆ ಸಮಾನ ಅಭಿವೃದ್ಧಿಗೆ ಅವಕಾಶ ಕೊಟ್ಟಿದ್ದಾರೆ. ಬಡವರಲ್ಲಿ ಶಕ್ತಿ ತುಂಬುವ ಕಾರ್ಯ ಮಾಡಿದ್ದಾರೆ. ಅದರಂತೆ ಜಿಲ್ಲೆಯ ಹಲವು ನೀರಾವರಿ ಯೋಜನೆ, ವಿಶೇಷವಾಗಿ ನಾಗರಬೆಟ್ಟ ಏತ ನೀರಾವರಿ ಯೋಜನೆ, ಪೀರಾಪೂರ ಏತ ನೀರಾವರಿ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸುವ ಮೂಲಕ ನುಡಿದಂತೆ ನಡೆದಿದ್ದಾರೆ ಎಂದ ಅವರು, ನಾರಾಯಣಪುರ ಜಲಾಶಯದ ಹಿನ್ನೀರಿನಿಂದ ಮುಳುಗಡೆಯಾಗುವ ನಾಲ್ಕು ಹಳ್ಳಿಗಳ ಜನರಿಗೆ ಹೊಸ ನಾಲ್ಕು ಗ್ರಾಮಗಳನ್ನು ರೂಪಿಸಬೇಕು. ಯೋಗ್ಯ, ಪರಿಹಾರ ಬೆಲೆ ದೊಕಿಸಿಕೊಡಬೇಕು. ರಸ್ತೆ, ಜಲಾಶಯ ಹಿನ್ನೀರು, ಕಾಲುವೆಗಳ ವ್ಯಾಪ್ತಿಯಿಂದ ಬಾಧಿತವಾಗುವ ಗ್ರಾಮಗಳ ಜನರಿಗೆ ಯೋಗ್ಯ ಬೆಲೆಯ ಪರಿಹಾರವನ್ನು ದೊರಕಿಸಬೇಕು. ಸಂತ್ರಸ್ಥರಿಗೆ ಕಲ್ಯಾಣ ನಿಧಿ ಸ್ಥಾಪಿಸಬೇಕು. ತಾಳಿಕೋಟೆ ಹೊಸ ತಾಲೂಕಾ ರಚನೆ ಸಂದರ್ಭದಲ್ಲಿ ಎಲ್ಲ ಮೂಲ ಸೌಕರ್ಯಗಳಿಗೆ ಒತ್ತನ್ನು ನೀಡುವಂತೆ ಮಾನ್ಯ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಸಿ.ಎಸ್.ನಾಡಗೌಡ ಸೇರಿದಂತೆ ಅನೇಕ ಸಂಘ-ಸಂಸ್ಥೆಗಳು ಮಾನ್ಯ ಮುಖ್ಯಮಂತ್ರಿಗಳಿಗೆ ಸನ್ಮಾನಿಸಿದರು. ಶಿಕ್ಷಣ ಕ್ಷೇತ್ರದಲ್ಲಿ ಮತ್ತು ಇತರೆ ಅಭಿವೃದ್ಧಿ ಕಾರ್ಯಗಳಲ್ಲಿ ಉತ್ತಮ ಸೇವೆ ಸಲ್ಲಿಸಿದವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯರಾದ ಎಸ್.ಆರ್.ಪಾಟೀಲ ಅವರು ಮಾತನಾಡಿದರು. ಶಾಸಕರಾದ ಯಶವಂತರಾಯಗೌಡ ಪಾಟೀಲ, ಶಿವಾನಂದ ಎಸ್.ಪಾಟೀಲ, ಜಿಲ್ಲಾ ಪಂಚಾಯತ್ ಅಧ್ಯಕ್ಷೆ ಶ್ರೀಮತಿ ನೀಲಮ್ಮ ಮೇಟಿ, ಜಿಲ್ಲಾಧಿಕಾರಿ ಕೆ.ಬಿ.ಶಿವಕುಮಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸುಂದರೇಶಬಾಬು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

------------------